# ಐದು ವರ್ಷದಲ್ಲಿ ಎಲೆಕ್ಟ್ರಿಕ್ ಬಸ್ ಸಂಚಾರ

ಬೆಂಗಳೂರು: ಮುಂದಿನ ಐದು ವರ್ಷಗಳಲ್ಲಿ ಬೆಂಗಳೂರಿನಲ್ಲಿ ಪೆಟ್ರೋಲ್, ಡೀಸೆಲ್ ಬಸ್‌ಗಳ ಬದಲಿಗೆ ಎಲೆಕ್ಟ್ರಿಕ್ ಬಸ್‌ಗಳು ಸಂಚರಿಸಲಿವೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ.

ಅಂತಾರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರದಲ್ಲಿ ಬುಧವಾರ ಹಮ್ಮಿಕೊಂಡಿದ್ದ 8ನೇ ಅಂತಾರಾಷ್ಟ್ರೀಯ ಬಸ್ ವರ್ಲ್ಡ್ ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು, 20 ವರ್ಷಗಳಿಂದ ಈಚೆಗೆ ಬೆಂಗಳೂರು ಅತ್ಯಂತ ವೇಗವಾಗಿ ಬೆಳೆಯುತ್ತಿದೆ. ಐಟಿ-ಬಿಟಿ, ಕೈಗಾರಿಕೆ, ವಿಜ್ಞಾನ ತಂತ್ರಜ್ಞಾನ, ಸಂಶೋಧನೆ, ಏರೋಸ್ಪೇಸ್ ಸೇರಿದಂತೆ ಎಲ್ಲ ಕ್ಷೇತ್ರಗಳಿಗೂ ಬೆಂಗಳೂರೇ ಕೇಂದ್ರವಾಗಿದೆ.

**■ ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಭರವಸೆ**

ನಗರದಲ್ಲಿ ಟ್ರಾಫಿಕ್ ಸಮಸ್ಯೆ ಹೆಚ್ಚಾಗಿದೆ. ಪ್ರತಿ ನಿತ್ಯ ನಗರದಲ್ಲಿ ನಿತ್ಯ 70 ಲಕ್ಷ ವಾಹನಗಳು ಸಂಚರಿಸುತ್ತಿವೆ. ಆದರೆ, ಈ ವಾಹನಗಳಿಗೆ ವ್ಯವಸ್ಥಿತ ರಸ್ತೆಗಳಿಲ್ಲ. ಡಿಸೇಲ್, ಪೆಟ್ರೋಲ್ ಬಸ್‌ಗಳಿಂದ ವಾಯು ಮಾಲಿನ್ಯ ಹೆಚ್ಚಿದೆ. ವಾಯು ಮಾಲಿನ್ಯ ತಡೆಗಟ್ಟಲು ಎಲೆಕ್ಟ್ರಿಕ್ ಬಸ್‌ಗಳನ್ನು ಪರಿಚಯಿಸುವುದು ಉತ್ತಮ ಎಂದರು.

ಈ ಬಾರಿ ಬಸ್ ವರ್ಲ್ಡ್ ಬೆಂಗಳೂರಿನಲ್ಲಿ ನಡೆಯುತ್ತಿರುವುದು ಹೆಮ್ಮೆಯ ವಿಷಯ. ಇದರಿಂದ ಸಾರಿಗೆ ಕ್ಷೇತ್ರದಲ್ಲಿ ಹೂಡಿಕೆ ಹೆಚ್ಚುವ ನಿರೀಕ್ಷೆ ಇದೆ. ಈ ಪ್ರದರ್ಶನದಲ್ಲಿ ಚೈನಾ, ಕೋರಿಯಾ, ಆಸ್ಟ್ರೇಲಿಯಾ, ಬೆಲ್ಜಿಯಂನಿಂದ ಕಂಪನಿಗಳು ಆಗಮಿಸಿದ್ದು, ಎಲ್ಲರೂ ತಂತ್ರಜ್ಞಾನವನ್ನು ಹಂಚಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.